ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 27–10–2017

# ಪತ್ರಿಕಾ ಆಮಂತ್ರಣ

1. **World Food Day – 2017**

**Inauguration by:**

Sri Chiranjeev Singh,
Former Development Commissioner & Additional Chief Secretary Government of Karnataka and Chairman, AME Foundation.

**Presided over by**:

Dr. M. Mallappa, President, IAT, Bengaluru.

**Date:** 28-10-2017, Saturday Time 11.00 AM.

**Place** : Dr. H.R. Arakeri Auditorium, IAT, # 15, Queens Road, Bengaluru – 560 052.

2. **ಪವರ್ ಅವಾರ್ಡ್ಸ್ – 2017**

**ಉದ್ಘಾಟನೆ:**

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಅಧ್ಯಕ್ಷತೆ:**

ಆರ್. ರೋಷನ್ ಬೇಗ್, ನಗರಾಭಿವೃದ್ಧಿ ಮತ್ತು ಹಜ್ ಸಚಿವರು.

ದಿನಾಂಕ: 28–10–2017 ಶನಿವಾರ, ಸಮಯ : ಸಂಜೆ 5.00 ಗಂಟೆಗೆ

ಸ್ಥಳ: ಅರಮನೆ ಮುಖ್ಯ ದ್ವಾರ, ವಸಂತ ನಗರ, ಬೆಂಗಳೂರು.

ಸಂಖ್ಯೆ 221/341

**ಪತ್ರಿಕಾ ಪ್ರಕಟಣೆ**

## ತರಬೇತಿ ನೀಡಲು ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)

ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿತವತಿಯಿಂದ ಲಂಬಾಣಿ ಜನಾಂಗದವರಿಗೆ ಕೌಶಲ್ಯ ಅಭಿವೃದಧಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಿದೆ.

ಲಘುವಾಹನ, ಎಲೆಕ್ಟ್ರಿಕಲ್, ಬ್ಯೂಟಿಪಾರ್ಲರ್, ಗಣಕಯಂತ್ರ, ಪುಷ್ಪಾಂಲಕಾರ, ವ್ಯಕ್ತಿ ವಿಕಸನ, ಟ್ರ್ಯಾಕ್ಟರ್ ದುರಸ್ತಿ, ಮೋಟಾರ್ ಸೈಕಲ್ ದುರಸ್ತಿ, ವಿದ್ಯುತ್ ಉಪಕರಣಗಳ ದುರಸ್ತಿ, ಲಂಬಾಣಿ ಕಸೂತಿ ಕಲೆ ಮತ್ತು ಹೊಲಿಗೆ, ಮೋಟಾರ್ ರಿವೈಂಡಿಗ್ ತರಬೇತಿ ನೀಡಲಾಗುವುದು.

8ನೇ ತರಗತಿಯಿಂದ ಪದವಿವರೆಗೆ ವಿದ್ಯಾರ್ಹತೆ ಹೊಂದಿರುವ 18 ರಿಂದ 40 ವರ್ಷ ವಯೋಮಾನದ ಯುವಕ/ಯುವತಿಯರು ಅರ್ಜಿ ಸಲ್ಲಿಸಬಹುದು. ದಿನಾಂಕ 10-11-2017 ರೊಳಗೆ ಅಭಿವೃದ್ಧಿ ಅಧಿಕಾರಿಗಳು, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ, ಬೆಂಗಳೂರು ವಲಯ, ನಂ 6, ಜಿ.ಪಿ.ಆರ್. ಟವರ್, ಟಸ್ಕರ್ ಟೌನ್, ಶಿವಾಜಿನಗರ, ಬೆಂಗಳೂರು ಇಲ್ಲಿಗೆ ಸಲ್ಲಿಸಬೇಕು ಎಂದು ನಿಗಮದ ಅಭಿವೃದ್ಧಿ ಅಧಿಕಾರಿಗಳ ಕಚೇರಿ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

**ಸಂಖ್ಯೆ 222/342**

## ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯದಲ್ಲಿರುವ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಬೇಡಿಕೆಗಳ ಅಧ್ಯಕ್ಷರ ಹುದ್ದೆಗಳನ್ನು ಭರ್ತಿಮಾಡಲು ಈ ಕೆಳಕಂಡ ಜಿಲ್ಲೆಗಳ ಅಧ್ಯಕ್ಷರ ಸ್ಥಾನಕ್ಕೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕೊಡಗು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ – 1 ಹುದ್ದೆ, ಬೆಂಗಳೂರು ಗ್ರಾಮಾಂತರ ಹಾಗೂ ಬೆಂಗಳೂರು ನಗರ 1ನೇ ಹೆಚ್ಚುವರಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ – 1 ಹುದ್ದೆ ಹಾಗೂ ಚಿಕ್ಕಮಗಳೂರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ವೇದಿಕೆ – 1 ಹುದ್ದೆ.

ಅರ್ಜಿಯನ್ನು ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕವಾಗಿದ್ದು, ಅರ್ಜಿಯನ್ನು ರಿಜಿಸ್ಟ್ರಾರ್ ಮತ್ತು ಆಡಳಿತಾಧಿಕಾರಿ, ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಬಸವ ಭವನ, ಹೈ ಗ್ರೌಂಡ್ಸ್, ಬೆಂಗಳೂರು – 560 001 ಇವರಿಗೆ ತಲುಪುವಂತೆ ಸಲ್ಲಿಸುವುದು.

ಹೆಚ್ಚಿನ ಮಾಹಿತಿ ಹಾಗೂ ನಿಗದಿತ ಅರ್ಜಿ ನಮೂನೆ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ವೆಬ್‌ಸೈಟ್ http://kscdrc.kar.nic.in ನಲ್ಲಿ ಲಭ್ಯವಿದ್ದು, ಸಂಬಂಧಪಟ್ಟ ಅಭ್ಯರ್ಥಿಗಳು ವೆಬ್‌ಸೈಟ್‌ನಿಂದ ಅರ್ಜಿ ನಮೂನೆಯನ್ನು ನೇರವಾಗಿ ಪಡೆದುಕೊಳ್ಳಬಹುದಾಗಿದೆ ಅಥವಾ ಕರ್ನಾಟಕ ರಾಜ್ಯ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ನೇರವಾಗಿ ಬಂದು ರೂ 50 ಗಳನ್ನು ಪಾವತಿಸಿ ಅರ್ಜಿಯನ್ನು ಪಡೆದುಕೊಳ್ಳಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 223/343

## ಹೆಚ್ಚುವರಿ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿನ ಗಣತೀದಾರರ 01 (ಹೈ.ಕ.) ಹುದ್ದೆಗೆ ಹೆಚ್ಚುವರಿ ಆಯ್ಕೆಪಟ್ಟಿಯನ್ನು ಅಕ್ಟೋಬರ್ 26 ರಂದು ಆಯೋಗದ ಜಾಲತಾಣ www.kpsc.kar.nic.in ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 224/344

## ಸಚಿವರ ಪ್ರವಾಸ

**ಬೆಂಗಳೂರು, ಅಕ್ಟೋಬರ್ 27 (ಕರ್ನಾಟಕ ವಾರ್ತೆ)**

**ಕಾರ್ಮಿಕ ಹಾಗೂ ಕೌಶಲ್ಯಾಭಿವೃದ್ಧಿ ಸಚಿವ ಶ್ರೀ ಸಂತೋಷ್ ಎಸ್. ಲಾಡ್, ಅವರು ಅಕ್ಟೋಬರ್ 28 ರಂದು ಹೊಸಪೇಟೆಗೆ ಪ್ರವಾಸಕೈಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.**